**2 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ, ದೇವನಹಳ್ಳಿ**
**ಸಿ.ಸಿ ನಂ.4022/2024**

ಹೆಸರು : ಖಾಜಾ
ತಂದೆಯ ಹೆಸರುಃ ಚಾಂದ್ ಪಾಷಾ
ವಯಸ್ಸುಃ 32 ವರ್ಷ
ಉದ್ಯೋಗಃ ರೇಷ್ಮೇ ಕೆಲಸ
ವಾಸಃ ವಿಜಯಪುರ

**CW-3, PW-3**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 12-03-2026**
**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿರವರಿಂದಃ**

ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿ ನನಗೆ ಗೊತ್ತು. ಅವನು ನನ್ನ ಸ್ನೇಹಿತ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಘಟನೆಯನ್ನು ಕಣ್ಣಾರೆ ನೋಡಿರುವುದಿಲ್ಲ. ನಾನು ಈ ಪ್ರಕರಣದ ಸಂಬಂದ ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಇನ್ನುಳಿದಂತೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಸ.ಸ.ಅ ರವರು ಕೋರಿದ್ದು ಸಾಕ್ಷಿಯು ಅಭಿಯೋಜನ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವ ಕಾರಣ ಮಾನ್ಯ ಸ ಸ ಅ ರವರ ಕೋರಿಕೆಯನ್ನು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದ**

ಚಾಸಾ 1 ಹಾಗೂ 1 ನೇ ಆರೋಪಿ ಮಸ್ಲೀಂ ಸಂಪ್ರದಾಯದಂತೆ ವಿವಾಹವಾಗಿ ವಿಜಯಪುರದಲ್ಲಿ ವಾಸವಾಗಿರುತ್ತಾರೆ. ಮದುವೆಯಾದ ಕೆಲವು ತಿಂಗಳ 1 ನೇ ಆರೋಪಿ ಚಾಸಾ 1 ರವರೊಂದಿಗೆ ಅನ್ಯೋನ್ಯವಾಗಿ ಸಂಸಾರ ಮಾಡಿಕೊಂಡಿದ್ದು, ನಂತರ ಸಂಸಾರದ ವಿಚಾರದಲ್ಲಿ ಆಗಾಗ ಜಗಳ ಮಾಡುವುದು, ಹೊಡೆಯುವುದು, ಬೈಯುವುದು ಹಾಗೂ ಮಾನಸಿಕ ಮತ್ತು ದೈಹಿಕವಾಗಿ ಕಿರುಕುಳ ನೀಡುತ್ತಿರುವ ವಿಷಯ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ದಿನಾಂಕ 02-08-2024 ರಂದು ಬೆಳಗಿನ ಜಾವ 2.30 ಗಂಟೆಯ ಸಮಯದಲ್ಲಿ 1 ನೇ ಆರೋಪಿಯು ಮನೆಗೆ ತಡವಾಗಿ ಬಂದಿದ್ದನ್ನು ಚಾಸಾ 1 ರವರು ಪ್ರಶ್ನಿಸಿದ್ದಕ್ಕೆ ಏಕಾ ಏಕಿ ಚಾಸಾ 1 ರವರ ಬಲಗೈ ತಿರುಗಿಸಿ, ಕತ್ತು ಹಿಸುಕಿ, ಕೈ ಕಾಲುಗಳಿಂದ ಒದ್ದು, ಬೆನ್ನಿಗೆ ಮತ್ತು ಎದೆಗೆ ಒಡೆದು ಸಾಮಾನ್ಯ ಸ್ವರೂಪದ ಗಾಯ ಉಂಟು ಮಾಡಿ ಈ ವಿಚಾರವನ್ನು ಮನೆಯವರಿಗೆ ತಿಳಿಸಿದರೆ ಸಾಯಿಸುವುದಾಗಿ ಪ್ರಾಣ ಬೆದರಿಕೆ ಹಾಕಿ, ಅವಾಚ್ಯ ಶಬ್ದಗಳಿಂದ ಬೈದು, ಚಾಸಾ 1 ರವರಿಗೆ ಮಾನಸಿಕವಾಗಿ ಹಾಗೂ ದೈಹಿಕವಾಗಿ ಕಿರುಕುಳ ನೀಡಿದ್ದು ಹಾಗೂ 2 ನೇ ಆರೋಪಿಯು ಚಾಸಾ 1 ರವರಿಗೆ ಫೋನ್ ಕರೆ ಮಾಡಿ ನಾನು 1 ನೇ

ಆರೋಪಿಯ ಮೊದಲನೆ ಹೆಂಡತಿ, ನನಗೆ ಮದುವೆ ಆಗಿ 5 ತಿಂಗಳ ಮಗು ಇದ್ದು, ನನ್ನ ಗಂಡನನ್ನು ಬಿಟ್ಟು ಬಿಡು ಎಂದು ಹೇಳಿ ಮಾನಸಿಕವಾಗಿ ಕಿರುಕುಳ ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಮೇಲಿನಂತೆ ಪೋಲಿಸರಿಗೆ ದಿನಾಂಕ 10-08-2024 ರಂದು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆ ಪೂರ್ಣ ಬಾಗವನ್ನು ಓದಿ ಹೇಳಿದರೂ ಸಹ ಸಾಕ್ಷಿ ಗೊತ್ತಿಲ್ಲ ಎಂದು ಹೇಳಿರುತ್ತಾರೆ. ಸಾಕ್ಷಿಯು ಹೇಳಿಕೆಯ ಭಾಗವನ್ನು ನಿರಾಕರಿಸಿದ ಕಾರಣ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ಗೊತ್ತಿದ್ದರೂ ಸಹ, 1 ನೇ ಆರೋಪಿ ನನ್ನ ಸ್ನೇಹಿತನಾದ ಕಾರಣ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಂ ಎಂ ಆರೋಪಿತರ ಪರ ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಎ ಒಪ್ಪಲಾಗಿದೆ.

ಎರಡನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್ ಸಿ.,

ದೇವನಹಳ್ಳಿ.

**2 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ, ದೇವನಹಳ್ಳಿ**
**ಸಿ.ಸಿ ನಂ.4022/2024**

ಹೆಸರು : ಸೈಯದ್ ಕದೀರ್ ಪಾಷಾ
ತಂದೆಯ ಹೆಸರುಃ ಸೈಯದ್ ಇಸ್ಮಾಯಿಲ್ ಸಾಬ್
ವಯಸ್ಸುಃ 38 ವರ್ಷ
ಉದ್ಯೋಗಃ ರೇಷ್ಮೇ ಕೆಲಸ
ವಾಸಃ ವಿಜಯಪುರ

**CW-2, PW-2**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 12-03-2026**
**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿರವರಿಂದಃ**

ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿ ನನಗೆ ಗೊತ್ತು. ಅವನು ನನ್ನ ಸ್ನೇಹಿತ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಘಟನೆಯನ್ನು ಕಣ್ಣಾರೆ ನೋಡಿರುವುದಿಲ್ಲ. ನಾನು ಈ ಪ್ರಕರಣದ ಸಂಬಂದ ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಇನ್ನುಳಿದಂತೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಸ.ಸ.ಅ ರವರು ಕೋರಿದ್ದು ಸಾಕ್ಷಿಯು ಅಭಿಯೋಜನ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವ ಕಾರಣ ಮಾನ್ಯ ಸ ಸ ಅ ರವರ ಕೋರಿಕೆಯನ್ನು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದ**

ಚಾಸಾ 1 ಹಾಗೂ 1 ನೇ ಆರೋಪಿ ಮಸ್ಲೀಂ ಸಂಪ್ರದಾಯದಂತೆ ವಿವಾಹವಾಗಿ ವಿಜಯಪುರದಲ್ಲಿ ವಾಸವಾಗಿರುತ್ತಾರೆ. ಮದುವೆಯಾದ ಕೆಲವು ತಿಂಗಳ 1 ನೇ ಆರೋಪಿ ಚಾಸಾ 1 ರವರೊಂದಿಗೆ ಅನ್ಯೋನ್ಯವಾಗಿ ಸಂಸಾರ ಮಾಡಿಕೊಂಡಿದ್ದು, ನಂತರ ಸಂಸಾರದ ವಿಚಾರದಲ್ಲಿ ಆಗಾಗ ಜಗಳ ಮಾಡುವುದು, ಹೊಡೆಯುವುದು, ಬೈಯುವುದು ಹಾಗೂ ಮಾನಸಿಕ ಮತ್ತು ದೈಹಿಕವಾಗಿ ಕಿರುಕುಳ ನೀಡುತ್ತಿರುವ ವಿಷಯ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ದಿನಾಂಕ 02-08-2024 ರಂದು ಬೆಳಗಿನ ಜಾವ 2.30 ಗಂಟೆಯ ಸಮಯದಲ್ಲಿ 1 ನೇ ಆರೋಪಿಯು ಮನೆಗೆ ತಡವಾಗಿ ಬಂದಿದ್ದನ್ನು ಚಾಸಾ 1 ರವರು ಪ್ರಶ್ನಿಸಿದ್ದಕ್ಕೆ ಏಕಾ ಏಕಿ ಚಾಸಾ 1 ರವರ ಬಲಗೈ ತಿರುಗಿಸಿ, ಕತ್ತು ಹಿಸುಕಿ, ಕೈ ಕಾಲುಗಳಿಂದ ಒದ್ದು, ಬೆನ್ನಿಗೆ ಮತ್ತು ಎದೆಗೆ ಒಡೆದು ಸಾಮಾನ್ಯ ಸ್ವರೂಪದ ಗಾಯ ಉಂಟು ಮಾಡಿ ಈ ವಿಚಾರವನ್ನು ಮನೆಯವರಿಗೆ ತಿಳಿಸಿದರೆ ಸಾಯಿಸುವುದಾಗಿ ಪ್ರಾಣ ಬೆದರಿಕೆ ಹಾಕಿ, ಅವಾಚ್ಯ ಶಬ್ದಗಳಿಂದ ಬೈದು, ಚಾಸಾ 1 ರವರಿಗೆ ಮಾನಸಿಕವಾಗಿ ಹಾಗೂ ದೈಹಿಕವಾಗಿ ಕಿರುಕುಳ ನೀಡಿದ್ದು ಹಾಗೂ 2 ನೇ ಆರೋಪಿಯು ಚಾಸಾ 1 ರವರಿಗೆ ಫೋನ್ ಕರೆ ಮಾಡಿ ನಾನು 1 ನೇ

ಆರೋಪಿಯ ಮೊದಲನೆ ಹೆಂಡತಿ, ನನಗೆ ಮದುವೆ ಆಗಿ 5 ತಿಂಗಳ ಮಗು ಇದ್ದು, ನನ್ನ ಗಂಡನನ್ನು ಬಿಟ್ಟು ಬಿಡು ಎಂದು ಹೇಳಿ ಮಾನಸಿಕವಾಗಿ ಕಿರುಕುಳ ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಮೇಲಿನಂತೆ ಪೋಲಿಸರಿಗೆ ದಿನಾಂಕ 10-08-2024 ರಂದು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆ ಪೂರ್ಣ ಬಾಗವನ್ನು ಓದಿ ಹೇಳಿದರೂ ಸಹ ಸಾಕ್ಷಿ ಗೊತ್ತಿಲ್ಲ ಎಂದು ಹೇಳಿರುತ್ತಾರೆ. ಸಾಕ್ಷಿಯು ಹೇಳಿಕೆಯ ಭಾಗವನ್ನು ನಿರಾಕರಿಸಿದ ಕಾರಣ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ಗೊತ್ತಿದ್ದರೂ ಸಹ, 1 ನೇ ಆರೋಪಿ ನನ್ನ ಸ್ನೇಹಿತನಾದ ಕಾರಣ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಂ ಎಂ ಆರೋಪಿತರ ಪರ ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಎ ಒಪ್ಪಲಾಗಿದೆ.

ಎರಡನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್ ಸಿ.,

ದೇವನಹಳ್ಳಿ.